2. ಈ ರಸ್ತೆಯನ್ನು ಹೊಸದಾಗಿ ನಿರ್ಮಾಣ ಮಾಡಲಾಗುತ್ತಿದ್ದು, ಕೆಲಸ ಪ್ರಗತಿಯಲ್ಲಿದೆ. ಇಲ್ಲಿಯವರೆಗೆ ರೂ. 39.42 ಲಕ್ಷ ಖರ್ಚಾಗಿರುತ್ತದೆ.

3. ಈ ಕಾಮಗಾರಿಗೆ ನಿಗದಿಪಡಿಸಿರುವ ಅವಧಿ 15 ತಿಂಗಳುಗಳು.

4. ಪ್ರಸ್ತುತ ಗುತ್ತಿಗೆ ವಹಿಸಿಕೊಂಡಿರುವ ಗುತ್ತಿಗೆದಾರರಿಗೆ ಕಾಮಗಾರಿಯನ್ನು ಪೂರ್ತಿಗೊಳಿಸಲು ದಿ: 13- 10- 2001ರವರೆಗೆ ಕಾಲಾವಧಿ ಇರುತ್ತದೆ.

5. ನಿಗದಿತ ಅವಧಿಯಲ್ಲಿ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಪ್ರಯತ್ನಿಸಲಾಗುವುದು.

ರಾಜ್ಯದ ಉದ್ಯೋಗ ವಿನಿಮಯ ಕೇಂದ್ರಗಳು.

523(292)

ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಉದ್ಯೋಗ ವಿನಿಮಯ ಕೇಂದ್ರಗಳಿಂದ 1998-99 ಹಾಗೂ 1999-2000ನೇ ಸಾಲಿನಲ್ಲಿ ಎಷ್ಟು ಜನರಿಗೆ ನೌಕರಿ ನೀಡಲಾಗಿದೆ? (ವಿವರ ಒದಗಿಸುವುದು)

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು):

ಅ)

ವರ್ಷ	ಉದ್ಯೋಗ ಒದಗಿಸಿದ ಸಂಖ್ಯೆ
1998-99	25,412
1999-2000	19,218

ಬಿ.ಹೆಚ್ ರಸ್ತೆಯ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ.

524(294)

ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ): ಮಾನ್ಯ ಲೋಕೋಪಯೋಗಿ